ಕರ್ನಾಟಕ ಸರ್ಕಾರ

ಸಂಖ್ಯೆ: ಕಂಇ 158 ಟಿಎನ್‌ಆರ್ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21-12-2021.

## ಆದೇಶ

ವಿಶ್ವ ಆರೋಗ್ಯ ಸಂಸ್ಥೆಯು ದಿನಾಂಕ:26.11.2021ರ ಹೇಳಿಕೆಯಲ್ಲಿ SARS-CoV-2 ರೂಪಾಂತರ B.1.1.529 ವನ್ನು (ಒಮಿಕ್ರಾನ್ ಎಂದು ಹೆಸರಿಸಲಾಗಿದೆ) ಕಾಳಜಿಯ ರೂಪಾಂತರ (Variant of Concern) ಎಂದು ದೃಢಪಡಿಸಿರುತ್ತದೆ. ಭಾರತದಲ್ಲಿಯೂ ರೂಪಾಂತರಿ 'ಒಮಿಕ್ರಾನ್' ವೈರಾಣು ಸೋಂಕು ಪತ್ತೆಯಾಗಿರುತ್ತದೆ. ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ಹೊರಡಿಸಿರುವ ಮಾರ್ಗಸೂಚಿಗಳಿಗೆ ಅನುಗುಣವಾಗಿ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ರಾಜ್ಯದಲ್ಲಿ ರೂಪಾಂತರಿ ವೈರಾಣು ಹರಡುವಿಕೆಯನ್ನು ತಡೆಗಟ್ಟುವ ಸಲುವಾಗಿ 'ಅಪಾಯದಲ್ಲಿದೆ' ಎಂದು ಗುರುತಿಸಲ್ಪಟ್ಟಿರುವ ದೇಶಗಳಿಂದ ಆಗಮಿಸುವ ಪ್ರಯಾಣಿಕರನ್ನು ಕಟ್ಟುನಿಟ್ಟಾದ ತಪಾಸಣೆ ಮತ್ತು ಪರೀಕ್ಷೆಗಳಿಗೆ ಒಳಪಡಿಸಲು ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ.

ಪ್ರಸಕ್ತ ಸನ್ನಿವೇಶದಲ್ಲಿ ರಾಜ್ಯದಲ್ಲಿ ವೈರಾಣು ಹರಡುವಿಕೆಯನ್ನು ತಡೆಗಟ್ಟಲು ಪರೀಕ್ಷೆ-ಪತ್ತೆ-ಚಿಕಿತ್ಸೆ-ಲಸಿಕಾಕರಣ ಮತ್ತು ಕೋವಿಡ್-19 ಸಮುಚಿತ ವರ್ತನೆಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದು ಮೊದಲಾದ ಐದು ತಂತ್ರಗಳ ಕುರಿತು ಪೂರ್ವಭಾವಿ ಮೇಲ್ವಿಚಾರಣೆ, ಕಣ್ಗಾವಲು ಮತ್ತು ಕೇಂದ್ರೀಕೃತ ಅನುಷ್ಠಾನ ಕ್ರಮಗಳನ್ನು ಕೈಗೊಳ್ಳಲು ಸಮ ಸಂಖ್ಯೆಯ ದಿನಾಂಕ:03.12.2021ರ ಆದೇಶದಲ್ಲಿ ಸ್ಪಷ್ಟ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ರೂಪಾಂತರಿ 'ಒಮಿಕ್ರಾನ್' ವೈರಾಣು ಸೋಂಕು ಹರಡುವಿಕೆಯನ್ನು ನಿಯಂತ್ರಿಸಲು ರಾಜ್ಯ ಸರ್ಕಾರವು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಂಡಿದೆ. ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಸಂಬಂಧದಲ್ಲಿ ಇನ್ನೂ ಹೆಚ್ಚಿನ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಕಂಡುಬಂದಿದ್ದು, ಇಂತಹ ಪರಿಸ್ಥಿತಿಯಲ್ಲಿ ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ **ಕ್ರಿಸ್‌ಮಸ್ ಹಬ್ಬ** ಹಾಗೂ **ಹೊಸವರ್ಷವನ್ನು** ಸರಳವಾಗಿ, ಭಕ್ತಿಪೂರಕವಾಗಿ ಮತ್ತು ಅರ್ಥಗರ್ಭಿತವಾಗಿ ಆಚರಿಸುವ ಅವಶ್ಯಕತೆ ಇದೆ. ಈ ಸಂದರ್ಭದಲ್ಲಿ ರಾಜ್ಯಾದ್ಯಂತ ಸಾಮೂಹಿಕ ಕೂಟ (Party)ಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಹೆಚ್ಚು ಜನಸಂಖ್ಯೆಯುಳ್ಳ ವಸತಿ ಸಮುಚ್ಚಯಗಳಲ್ಲಿ ಮತ್ತು ಪಬ್/ಬಾರ್/ರೆಸ್ಟೋರೆಂಟ್ ಹಾಗೂ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವಂತಹ ಸ್ಥಳಗಳಲ್ಲಿ ಆಯೋಜಿಸುವುದನ್ನು ನಿಷೇಧಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಪ್ರಕರಣ 24(ಎಲ್)ರ ಅಡಿಯಲ್ಲಿ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ರಾಜ್ಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷನಾಗಿ ಈ ಕೆಳಗೆ ಸಹಿ ಮಾಡಿರುವ ನಾನು ಅನುಬಂಧದಲ್ಲಿರುವಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತೇನೆ. ಈ ಮಾರ್ಗಸೂಚಿಗಳನ್ನು ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಪೊಲೀಸ್ ಆಯುಕ್ತರು, ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಹಾಗೂ ಇತರ ಇಲಾಖಾ ಮುಖ್ಯಸ್ಥರು ಮತ್ತು ಪ್ರಾಧಿಕಾರಗಳು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸತಕ್ಕದ್ದು.

(ಪಿ. ರವಿಕುಮಾರ್)
ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ
ಅಧ್ಯಕ್ಷರು,ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ
ಪ್ರಾಧಿಕಾರದ ಕಾರ್ಯಕಾರಿ ಸಮಿತಿ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.

## ಸರ್ಕಾರದ ಆದೇಶ ಸಂಖ್ಯೆ:ಕಂಇ 158 ಟಿಎನ್‌ಆರ್ 2020, ದಿ:21-12-2021ರ ಅನುಬಂಧ ಕ್ರಿಸ್‌ಮಸ್ ಹಾಗೂ ಹೊಸ ವರ್ಷ ಆಚರಣೆ ಸಂಬಂಧವಾಗಿ ಮಾರ್ಗಸೂಚಿಗಳು

### ಕ್ರಿಸ್ ಮಸ್ ಆಚರಣೆ

1. ಚರ್ಚ್ ಆವರಣದಲ್ಲಿ ಸಾಂಪ್ರದಾಯಿಕ ರೀತಿಯಲ್ಲಿ ಪ್ರಾರ್ಥನೆಗಳು / ಸಾಮೂಹಿಕ ಇತ್ಯಾದಿಗಳನ್ನು ಕೋವಿಡ್ ಸಮುಚಿತ ವರ್ತನೆ ಅನುಸರಿಸುವುದು.
2. ಆಚರಣೆಗಳು ಅಥವಾ ಪ್ರಾರ್ಥನೆಗಳನ್ನು ನಡೆಸಲು ಯಾವುದೇ ಸಾರ್ವಜನಿಕ ಸ್ಥಳಗಳು / ರಸ್ತೆಗಳು / ಉದ್ಯಾನವನ ಇತ್ಯಾದಿಗಳನ್ನು ಬಳಸುವಂತಿಲ್ಲ.

### ಹೊಸವರ್ಷಾಚರಣೆ ಈ ಕೆಳಕಂಡ ಮಾರ್ಗಸೂಚಿಯು ದಿನಾಂಕ:30-12-2021 ರಿಂದ 2-1-2022 ರ ವರೆಗೆ ಜಾರಿಯಲ್ಲಿರತಕ್ಕದ್ದು:

1. ಕ್ಲಬ್‌ಗಳು / ಪಬ್‌ಗಳು / ರೆಸ್ಟೋರೆಂಟ್‌ಗಳು / ಹೋಟೆಲ್‌ಗಳು / ಉದ್ಯಾನವನಗಳು ಅಥವಾ ಖಾಸಗಿ ಸ್ಥಳಗಳಲ್ಲಿ ಡಿಜೆ / ಆರ್ಕೆಸ್ಟ್ರಾ / ಸಮೂಹ ನೃತ್ಯ (Dancing) ಮುಂತಾದ ಯಾವುದೇ ವಿಶೇಷ ಕಾರ್ಯಕ್ರಮಗಳನ್ನು ನಡೆಸಲು ಅವಕಾಶವಿರುವುದಿಲ್ಲ
2. ಹೊಸ ವರ್ಷವನ್ನು ಆಚರಿಸಲು ಸಾರ್ವಜನಿಕ ಸ್ಥಳಗಳು ಸೇರಿದಂತೆ ರಸ್ತೆಗಳು, ಉದ್ಯಾನವನಗಳು, ಆಟದ ಮೈದಾನಗಳು ಇತ್ಯಾದಿಗಳನ್ನು ಬಳಸಬಾರದು.
3. ರೆಸ್ಟೋರೆಂಟ್‌ಗಳು / ಹೋಟೆಲ್‌ಗಳು / ಕ್ಲಬ್‌ಗಳು / ಪಬ್‌ಗಳು ಎಂದಿನಂತೆ ಕೋವಿಡ್ ಸಮುಚಿತ ವರ್ತನೆಯೊಂದಿಗೆ ಸಿಬ್ಬಂದಿಗಳು RTPCR Negative ಮತ್ತು 2 ಡೋಸ್ ಕೋವಿಡ್ ಲಸಿಕೆಯನ್ನು ಕಡ್ಡಾಯವಾಗಿ ಪಡೆಯುವ ಮೂಲಕ ಕಾರ್ಯನಿರ್ವಹಿಸಬಹುದು.
4. ರೆಸ್ಟೋರೆಂಟ್‌ಗಳು / ಹೋಟೆಲ್‌ಗಳು / ಕ್ಲಬ್‌ಗಳು / ಪಬ್‌ಗಳಿಗೆ ಪ್ರವೇಶ ನೀಡುವ ಸಾರ್ವಜನಿಕರು ಕಡ್ಡಾಯವಾಗಿ 2 ಡೋಸ್ ಕೋವಿಡ್ ಲಸಿಕೆ ಯನ್ನು ಪಡೆದಿರುವುದನ್ನು ಪ್ರದರ್ಶಿಸಿದ ನಂತರವೇ ಪ್ರವೇಶಕ್ಕೆ ಅವಕಾಶ ಮಾಡಿಕೊಡತಕ್ಕದ್ದು.
5. ಅಪಾರ್ಟ್‌ಮೆಂಟ್ ಅಸೋಸಿಯೇಷನ್‌ಗೆ ಸಂಬಂಧಪಟ್ಟಂತೆ ಸಾಮಾಜಿಕ ಅಂತರ ಹಾಗೂ ಕೋವಿಡ್ ಸಮುಚಿತ ವರ್ತನೆಯೊಂದಿಗೆ ತಮ್ಮ ಆವರಣದಲ್ಲಿ ಕಾರ್ಯಕ್ರಮ ನಡೆಸಲು ಅನುಮತಿಸಲಾಗಿದೆ. ಆದರೆ ಗುಂಪು ನೃತ್ಯಕ್ಕಾಗಿ ಡಿಜೆ / ಡ್ಯಾನ್ಸ್ ಫ್ಲೋರ್‌ನಂತಹ ಯಾವುದೇ ವಿಶೇಷ ಕಾರ್ಯಕ್ರಮಗಳನ್ನು ಆಚರಿಸುವಂತಿಲ್ಲ. ಮೇಲಿನ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸುವುದನ್ನು ಖಚಿತಪಡಿಸಿಕೊಳ್ಳಲು ಸಂಘಟಕರು ಜವಾಬ್ದಾರರಾಗಿರುತ್ತಾರೆ.
6. ಸರ್ಕಾರದ ಆದೇಶ ಸಂಖ್ಯೆ: ಕಂಇ 158 ಟಿಎನ್‌ಆರ್ 2020, ದಿನಾಂಕ:03.12.2021ರಲ್ಲಿನ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸುವುದು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳುವುದು ಮತ್ತು ಹೋಟೆಲ್‌ಗಳು/ಮಾಲ್‌ಗಳು/ಪಬ್/ರೆಸ್ಟೋರೆಂಟ್‌ಗಳು ಹಾಗೂ ಅಂತಹ ಪ್ರದೇಶಗಳಲ್ಲಿ ಥರ್ಮಲ್ ಸ್ಕ್ರೀನಿಂಗ್ ಹಾಗೂ ಸ್ಯಾನಿಟೈಸರ್ ವ್ಯವಸ್ಥೆಯನ್ನು ಕಡ್ಡಾಯವಾಗಿ ಇರಿಸತಕ್ಕದ್ದು.
7. ಕೋವಿಡ್-19 ಸಾಂಕ್ರಾಮಿಕ ಸೋಂಕು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಹೊರಡಿಸಿದ ಮಾರ್ಗಸೂಚಿಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳು ತಪ್ಪದೇ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಅಲ್ಲದೇ, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ

ಇಲಾಖೆ, ಪೊಲೀಸ್ ಇಲಾಖೆ, ಮಹಾನಗರ ಪಾಲಿಕೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅಗ್ನಿಶಾಮಕ ಇಲಾಖೆ, ಜಿಲ್ಲಾಡಳಿತ ಹಾಗೂ ಇತರೆ ಇಲಾಖೆ/ಕಾರ್ಪೋರೇಷನ್/ಪ್ರಾಧಿಕಾರಗಳಿಂದ ಹೊರಡಿಸಲಾದ ಸೂಚನೆ ಹಾಗೂ ಮಾರ್ಗಸೂಚಿಗಳನ್ನು ಸಹ ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಮಾರ್ಗಸೂಚಿಗಳನ್ನು ಉಲ್ಲಂಘಿಸುವ ಯಾವುದೇ ವ್ಯಕ್ತಿಯು, ಭಾರತ ದಂಡ ಸಂಹಿತೆಯ 188ನೇ ಪ್ರಕರಣದಡಿ ಹಾಗೂ ಅನ್ವಯವಾಗಬಹುದಾದ ಇತರ ಕಾನೂನು ಉಪಬಂಧಗಳಡಿಯಲ್ಲಿನ ಕಾನೂನು ಕ್ರಮದ ಜೊತೆಗೆ ವಿಪತ್ತು ನಿರ್ವಹಣಾ ಅಧಿನಿಯಮ, 2005ರ ಸೆಕ್ಷನ್ 51 ರಿಂದ 60ರನ್ವಯ ಕಾನೂನು ಕ್ರಮಕ್ಕೆ ಒಳಪಡುತ್ತಾರೆ.

(ಪಿ. ರವಿಕುಮಾರ್)
ಮುಖ್ಯ ಕಾರ್ಯದರ್ಶಿ ಹಾಗೂ ಅಧ್ಯಕ್ಷರು
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ.